9981 ಪ್ರಾಥಮಿಕ ಶಾಲಾ ಶಿಕ್ಷಕರು ಮತ್ತು 4845 ಪ್ರೌಢಶಾಲಾ ಶಿಕ್ಷಕರ ಹುದ್ದೆಗಳು ಖಾಲಿ ಇವೆ.

-ಇಲ್ಲ-

ಉದ್ಭವಿಸುವುದಿಲ್ಲ

ಖಾಲಿ ಹುದ್ದೆಗಳನ್ನು ತುಂಬಲು ಶೀಘ್ರ ಕ್ರಮ ಕೈಗೊಳ್ಳಲಾಗುವುದು.

ವಿಷಯ:- ಸರ್ಕಾರಿ ಪಾಲಿಟೆಕ್ನಿಕ್ ಬೆಳಗಾವಿಯಲ್ಲಿ. ಟೆಲಿಕಮ್ಯುನಿಕೇಷನ್ ಡಿಪ್ಲೊಮೊ ಕೋರ್ಸ್

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ 250(306)

ಶ್ರೀ ಕೆ.ಸಿ.ಮೊಡಗೇಕರ ದೇಸಾಯಿ(ಹಿರೇಬಾಗೇವಾಡಿ)

ಮಾನ್ಯ ಉನ್ನತ ಶಿಕ್ಷಣ ಹಾಗೂ ವಕ್ಫ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಸರ್ಕಾರಿ ಪಾಲಿಟೆಕ್ನಿಕ್ ಬೆಳಗಾವಿಯಲ್ಲಿ ಟೆಲಿಕಮ್ಯುನಿಕೇಷನ್ ಡಿಪ್ಲೊಮೊ ಕೋರ್ಸನ್ನು ಪ್ರಾರಂಭಿಸಲು ಸರ್ಕಾರವು 1993-94ನೇ ಸಾಲಿನ ಆಯವ್ಯಯದಲ್ಲಿ ಹಣ ಒದಗಿಸಿದೆಯೇ?

ಆ) ಹಾಗಿದ್ದಲ್ಲಿ ಸದರಿ ಕೋರ್ಸ್‌ನ್ನು ಪ್ರಾರಂಭಿಸಲು ಅಗತ್ಯ ಕ್ರಮಗಳನ್ನು ಏಕೆ ತೆಗೆದುಕೊಂಡಿಲ್ಲ?

ಇ) ಸರ್ಕಾರಿ ಪಾಲಿಟೆಕ್ನಿಕ್ ಬೆಳಗಾವಿ ಈ ಸಂಸ್ಥೆಯು ಅತೀ ಹಳೆಯ ಸಂಸ್ಥೆಯಾಗಿದ್ದು ಉತ್ತಮ ಕಟ್ಟಡ ಹಾಗೂ ಇತರ ಮೂಲಭೂತ ಸೌಲಭ್ಯ ಇರುವ ಕುರಿತು ಸರ್ಕಾರಕ್ಕೆ ತಿಳಿದಿದೆಯೇ?

ಈ) ಸದರಿ ಕೋರ್ಸನ್ನು ಪ್ರಾರಂಭಿಸಲು ಸರ್ಕಾರವು ಕ್ರಮ ಜರುಗಿಸುವುದೇ?

ಶ್ರೀ ಎಸ್.ಎಂ.ಯಾಹ್ಯಾ

(ಉನ್ನತ ಶಿಕ್ಷಣ ಸಚಿವರು)

ಇಲ್ಲ

ಉದ್ಭವಿಸುವುದಿಲ್ಲ

ಹೌದು

ಪರಿಶೀಲಿಸಲಾಗುವುದು.

ವಿಷಯ:- ಬೆಳಗಾಂ ಜಿಲ್ಲೆಯಲ್ಲಿ ಕಪ್ಪುಹಲಗೆ ಯೋಜನೆ ಕುರಿತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 251(439)

ಶ್ರೀ ಕೆ.ಸಿ. ಮೊಡಗೇಕರ ದೇಸಾಯಿ(ಹಿರೇಬಾಗೇವಾಡಿ)

ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಕಪ್ಪುಹಲಗೆ ಯೋಜನೆಯ ಅಡಿ ಬೆಳಗಾಂ ಜಿಲ್ಲೆಯಲ್ಲಿ ಇದುವರೆಗೆ ನಿರ್ಮಾಣಗೊಂಡ ಶಾಲಾ ಕೊಠಡಿಗಳ ಸಂಖ್ಯೆ ಎಷ್ಟು? (ತಾಲ್ಲೂಕುವಾರು ಮಾಹಿತಿ ಒದಗಿಸುವುದು)

ಆ) ಬೆಳಗಾಂ ಜಿಲ್ಲೆಯಲ್ಲಿ ಈವರೆಗೆ ನೇಮಕವಾಗಿರುವ ಶಿಕ್ಷಕರ ಸಂಖ್ಯೆ ಎಷ್ಟು? (ಭಾಷಾವಾರು ಮಾಹಿತಿ ಒದಗಿಸುವುದು)

ಇ) ಬೆಳಗಾಂ ಜಿಲ್ಲೆಯಲ್ಲಿ ಖಾಲಿ ಇರುವ ಸಹಾಯಕ ಶಿಕ್ಷಕರ ಹುದ್ದೆಗಳ ಸಂಖ್ಯೆ ಎಷ್ಟು? (ಭಾಷಾವಾರು ಮಾಹಿತಿ ಒದಗಿಸುವುದು)

ಈ) ಸಹಾಯಕ ಶಿಕ್ಷಕರ ಖಾಲಿ ಹುದ್ದೆಗಳನ್ನು ಭರ್ತಿಮಾಡಲು ಸರ್ಕಾರ ಕೈಗೊಂಡಿರುವ